P.W- 1

**<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ</u>**

ದಿನಾಂಕಃ 27.02.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ,</u>**

ನಾನು ದಿನಾಂಕ 27.02.2025 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ.

ನಾನು ನನ್ನ ದಾವೆಗೆ ಸಂಬಂಧಿಸಿದಂತೆ ಗುಡೆಕೋಟೆ ಮಠದ ಸಿದ್ದಯ್ಯ ರವರ ಮರಣ ಪ್ರಮಾಣ ಪತ್ರದ ದೃಢಿಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು, ನಮ್ಮ ಕುಟುಂಬದ ವಂಶವೃಕ್ಷ ಪ್ರಮಾಣ ಪತ್ರವನ್ನು ನಿಪಿ-2 ಎಂದು, ಕೂಡ್ಲಿಗಿ ಬಣವಿಕಲ್ ಕರ್ನಾಟಕ ಗ್ರಾಮೀಣ ಬ್ಯಾಂಕ್ ಮ್ಯಾನೇಜರ್ ರವರಿಗೆ ನಾನು ನೀಡಲಾದ ಅರ್ಜಿಯನ್ನು ನಿಪಿ- 3 ಎಂದು, ಸದರಿ ಬ್ಯಾಂಕ್ ಗೆ ನಾನು ನೀಡಲಾದ ಮೆತ್ತೊಂದು ಅರ್ಜಿಯ ದೃಢಿಕೃತ ಪ್ರತಿಯನ್ನು ನಿಪಿ- 4 ಎಂದು ಎಂದು ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ,**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**